ಪಿ ಡಬ್ಲ್ಯೂ 1

**ದಿನಾಂಕಃ 17-05-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ವಿ.ಟಿ.ಕೆ. ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಾನು ಹಾಜರು ಪಡಿಸಿರುವ ದಾಖಲೆಗಳನ್ನು ಗುರುತಿಸಲು ಕೇಳಿಕೊಳ್ಳುತ್ತೇನೆ. ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

| | |
|---|---|
| ನಿಪಿ-1 | ಪ್ರಥಮ ವರ್ತಮಾನ ವರದಿಯ ಪ್ರತಿ |
| ನಿಪಿ-2 | ದೂರಿನ ಪ್ರತಿ |
| ನಿಪಿ-3 | ಸ್ಥಳ ಪಂಚನಾಮೆಯ ಪ್ರತಿ |
| ನಿಪಿ-4 | ಗಾಯದ ಪ್ರಮಾಣ ಪತ್ರದ ಪ್ರತಿ |
| ನಿಪಿ-5 | ಎಂ.ವಿ.ಎ ಪ್ರತಿ |
| ನಿಪಿ-6 | ಅಂತಿಮ ವರದಿಯ ಪ್ರತಿ ಎಂದು ಗುರುತಿಸಲಾಯಿತು. |

ಈ ಹಂತದಲ್ಲಿ ಮುಂದಿನ ಮುಖ್ಯ ವಿಚಾರಣೆಗೆ ಸಮಯವಕಾಶ ಕೋರಿದ್ದರಿಂದ ಸಮಯ ನೀಡಿ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.